ಮೂಲಭೂತ ಸೌಕರ್ಯ

208 (43)

ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡರ(ಮುದ್ದೇಬಿಹಾಳ)

ಅ) ರಾಜ್ಯದ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ಮುರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ಬೋಧಕೇತರರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ನಾರಾಯಣಸ್ವಾಮಿ (ಸಮಾಜ ಕಲ್ಯಾಣ, ಬಂಧಿಖಾನೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಅ) ಬಂದಿದೆ.

ಆ) ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿಯವರಿಗಾಗಿ 1245 ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು 487 ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಸೇರಿದಂತೆ 1732 ವಿದ್ಯಾರ್ಥಿ ನಿಲಯಗಳನ್ನು ರಾಜ್ಯದಾದ್ಯಂತ ನಡೆಸಲಾಗುತ್ತಿದೆ. ಇವುಗಳಲ್ಲಿ 1114 ಮೆಟ್ರಿಕ್ ಪೂರ್ವ, 228 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿವೆ. ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ನಿವೇಶನದ ಲಭ್ಯತೆಯನ್ನು ಅನುಸರಿಸಿ ಮೂಲಭೂತ ಸೌಲಭ್ಯಗಳನ್ನುಳ್ಳ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಪ್ರಸ್ತುತ 58 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ.200.00 ಕೋಟಿಗಳನ್ನು ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಿಸಲು ಆಯವ್ಯಯದಲ್ಲಿ ಒದಗಿಸಲಾಗಿದ್ದು, ಇದರಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳನ್ನು ಪೂರ್ಣಗೊಳಿಸಲು ಮತ್ತು 70 ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡಲು, ನಿವೇಶನ ಲಭ್ಯವಿಲ್ಲದೇ ಇರುವ ವಿದ್ಯಾರ್ಥಿ ನಿಲಯಗಳಿಗೆ ನಿವೇಶನವನ್ನು ಪಡೆಯಲು ಕ್ರಮ

ವಹಿಸಲಾಗಿದು. ನಿವೇಶನ ಲಭ್ಯವಾದ ನಂತರ ಉಳಿದವುಗಳಿಗೆ ಕಟ್ಟಡವನ್ನು ಹಂತ ಹಂತವಾಗಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಮತ್ತು ವಿದ್ಯಾರ್ಥಿ ನಿಲಯಗಳ ಕಟ್ಟಡ ದುರಸ್ತಿ ಹಾಗೂ ನವೀಕರಣಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆಯಡಿ ರೂ.60.00ಕೋಟಿಗಳನ್ನು ಒದಗಿಸಲಾಗಿದ್ದು, ಇದರಲ್ಲಿ ಶೌಚಾಲಯ, ಸ್ನಾನಗೃಹ, ನೀರಿನ ಸೌಲಭ್ಯ, ಕಿಟಿಕಿ ಬಾಗಿಲು ದುರಸ್ತಿ, ಸುಣ್ಣ ಬಣ್ಣ ದುರಸ್ಥಿ ಇತ್ಯಾದಿಗಳನ್ನು ಆದ್ಯತೆ ಮತ್ತು ಅವಶ್ಯಕತೆ ಅನುಸರಿಸಿ ಕೈಗೊಳ್ಳಲಾಗುತ್ತಿದೆ.

2009–10ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಉಪಯೋಜನೆಯಡಿ ವಿದ್ಯಾರ್ಥಿ ನಿಲಯಗಳ ನಿಲಯಾರ್ಥಿಗಳಿಗೆ ಹಾಸಿಗೆ ಹೊದಿಕೆ, ಟ್ರಂಕ್‌ಗಳು, ಆಟದ ಸಾಮಗ್ರಿ, ಪಾತ್ರೆ ಸಾಮಗ್ರಿ, ಎಲ್.ಪಿ.ಜಿ. ಗ್ಯಾಸ್ ಸಂಪರ್ಕ ಒದಗಿಸಲು ರೂ. 3750.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಗೊಳಿಸಲಾಗಿದ್ದು, ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. 2012–13ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಹಾಸಿಗೆ ಹೊದಿಕೆ, ಸೋಲಾರ್ ವಾಟರ್ ಹೀಟರ್‌ಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು 2009–10 ರಿಂದ 2011–12ನೇ ಸಾಲಿನವರೆಗೆ ಆಯಾ ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಅನುದಾವನ್ನು ಬಿಡುಗಡೆ ಮಾಡಲಾಗಿದೆ. ಸ್ವಂತ ಕಟ್ಟಡದಲ್ಲಿ ನಡೆಯುತ್ತಿರುವ 104 ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ಬಾಡಿಗೆ ಕಟ್ಟದಲ್ಲಿ ನಡೆಯುತ್ತಿರುವ 84 ವಿದ್ಯಾರ್ಥಿನಿಲಯಗಳ ಪೈಕಿ 42 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಕ್ರಮಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತದೆ. ಇನ್ನುಳಿದ 42 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಇವುಗಳಿಗೆ ಸೂಕ್ತವಾದ ನಿವೇಶನಗಳನ್ನು ಇಲಾಖೆಯ ಹೆಸರಿಗೆ ಪಡೆದು ಮೂಲಭೂತ ಸೌಕರ್ಯಗಳನ್ನೊಳಗೊಂಡ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು.

2012–13ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಕ್ರೋಢಿಕೃತ ಅನುದಾನದಲ್ಲಿ ಇಲಾಖೆಯ ವಿದ್ಯಾರ್ಥಿನಿಲಯ/ಆಶ್ರಮ ಶಾಲೆ/ಮೊರಾರ್ಜಿ ದೇಸಾಯಿ ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ

ವಸತಿ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.3.00 ಕೋಟಿಗಳನ್ನು ಹಂಚಿಕೆ ಮಾಡಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:- ಪ್ರಸ್ತುತ ರಾಜ್ಯದಲ್ಲಿ ಹಿಂದುಳಿದ ವರ್ಗಗಳ 1931 ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತುದ್ದು, ಇವುಗಳಲ್ಲಿ ಪ್ರಸ್ತುತ 1227 ಸ್ವಂತ ಕಟ್ಟಡಗಳಲ್ಲಿ, 704 ವಿದ್ಯಾರ್ಥಿನಿಲಯಗಳು ಬಾಡಿಗೆ. ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ.

ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ.

1. 72 ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.
2. 2012-13ನೇ ಸಾಲಿಗೆ 23 ವಿದ್ಯಾರ್ಥಿನಿಲಯಗಳಿಗೆ ಕಟ್ಟಡ ನಿರ್ಮಾಣ ಮಾಡಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ವಹಿಸಿಕೊಡಲಾಗಿದೆ.
3. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಕಾಲಂ ಸ್ಟ್ರಕ್ಚರ್ ಹೊಂದಿರುವ 17 ಕಟ್ಟಡಗಳನ್ನು ಗುರುತಿಸಿ ರೂ.17.72 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮೊದಲನೇ ಮಹಡಿ ನಿರ್ಮಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಕಾಮಗಾರಿಯನ್ನು ವಹಿಸಲಾಗಿದೆ.
4. 2012-13ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಕಟ್ಟಡ ಶೌಚಾಲಯ, ಸ್ನಾನ ಗೃಹ, ರಿಪೇರಿ ಇತ್ಯಾದಿಗಳಿಗಾಗಿ ಪ್ರತಿ ಜಿಲ್ಲೆಗೆ ಮೊದಲನೇ ಕಂತಾಗಿ ರೂ.40.00 ಲಕ್ಷಗಳಂತೆ ರೂ.12.00 ಕೋಟಿಗಳನ್ನು ಆಯಾ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ವಿದ್ಯಾರ್ಥಿ ನಿಲಯಗಳ ದುರಸ್ತಿಗಾಗಿ 2ನೇ ಕಂತಿನ ಹಣ ರೂ 6.13 ಕೋಟಿಗಳನ್ನು 11 ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ.
5. ವಿವಿಧ ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ 11 ನಿವೇಶನಗಳನ್ನು ರೂ.3.60 ಕೋಟಿ ವೆಚ್ಚದಲ್ಲಿ ಖರೀದಿಸಲಾಗಿದೆ.

6. 2012–13ನೇ ಸಾಲಿನಲ್ಲಿ ಕಟ್ಟಡಗಳ ನಿರ್ಮಾಣಕ್ಕಾಗಿ ವಿವಿಧ ಕಾರ್ಯಕ್ರಮಗಳಡಿ ಒಟ್ಟು ರೂ.99.02 ಕೋಟಿ ಹಣಾವಕಾಶವನ್ನು ಒದಗಿಸಲಾಗಿದ್ದು, ಹಂತ ಹಂತವಾಗಿ ಸ್ವಂತ ಕಟ್ಟಡ ಹಾಗೂ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡಿ ವಿದ್ಯಾರ್ಥಿಗಳಿಗೆ ಪೂರ್ಣ ಪ್ರಮಾಣದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.
7. 2012–13ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆ ವಿದ್ಯಾರ್ಥಿನಿಲಯಗಳ ಸುಧಾರಣಾ ಕಾರ್ಯಕ್ರಮದಲ್ಲಿ ರೂ.13.00 ಕೋಟಿ ವೆಚ್ಚದಲ್ಲಿ ವಿದ್ಯಾರ್ಥಿನಿಲಯಗಳಿಗೆ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗಿದೆ.
    - ನೀರಿನ ಕೊರತೆ ಇರುವ ವಿದ್ಯಾರ್ಥಿ ನಿಲಯಗಳಿಗೆ ಕೊಳವೆ ಬಾವಿ/ಪೈಪ್ ಲೈನ್. ಮೂಲಕ ನೀರು ಸರಬರಾಜು ಮಾಡುವುದು.
    - ಫ್ಲೋರೈಡ್ ಅಂಶ ಹೆಚ್ಚಿಗೆ ಇರುವ ಪ್ರದೇಶಗಳಲ್ಲಿ ಉಪಕರಣ ಅಳವಡಿಸಿ ಕುಡಿಯುವ ನೀರು ಸರಬರಾಜು ಮಾಡುವುದು.
    - ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪಾತ್ರೆ, ತಟ್ಟೆ, ಲೋಟ ಒದಗಿಸುವುದು.
    - ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಗ್ರಂಥಾಲಯಗಳಿಗೆ ಗಾಜಿನ ಅಲ್ಮೇರಾ ಒದಗಿಸುವುದು
    - ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಟ್ರಂಕು / ಪಿಜನ್ ರ್ಯಾಕ್ ಒದಗಿಸುವುದು.
    - ಅನಿಲ ಒಲೆ ಹಾಗೂ ಸಂಪರ್ಕ ಅಳವಡಿಸುವುದು.
    - ಜನರೇಟರ್‌ಗಳ ಪೂರೈಕೆ.

ಇ) **ಬೋಧಕ ವೃಂದದ ಸಿಬ್ಬಂದಿಯ ಕೊರತೆಗೆ ಸಂಬಂಧಿಸಿದಂತೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಿರ್ವಹಣೆಯಾಗುತ್ತಿರುವ 460 ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿಯ (ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಹೊರತುಪಡಿಸಿ) 5325 **ಬೋಧಕ** ಹುದ್ದೆಗಳಿಗೆ ನೇಮಕಾತಿ ಕ್ರಮಗಳನ್ನು ಕೈಗೊಂಡಿದ್ದು ಈ ಪೈಕಿ 85 ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಿರಿಸಿ ಉಳಿಕೆ **5240 ಹುದ್ದೆಗಳಿಗೆ** ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ. ಈ ಪೈಕಿ **445 ಚಿತ್ರಕಲಾ** ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ನ್ಯಾಯಾಲಯದ ತಡೆಇದ್ದು ನೇಮಕಾತಿಯನ್ನು ಕೈಗೊಂಡಿರುವುದಿಲ್ಲ. ಈ ನೇಮಕಾತಿ ಪ್ರಕ್ರಿಯೆಯಲ್ಲಿ ಮೆರಿಟ್ ಮತ್ತು ಮೀಸಲಾತಿಯಂತೆ ಒಟ್ಟು **4525 ಅಭ್ಯರ್ಥಿಗಳು** ಆಯ್ಕೆಯಾಗಿರುತ್ತಾರೆ. ಆಯ್ಕೆಯಾದ ಅಭ್ಯರ್ಥಿಗಳ ಪೈಕಿ **354 ವಿವಿಧ** ವೃಂದದ ಅಭ್ಯರ್ಥಿಗಳು ಗೈರು ಹಾಜರಾಗಿದ್ದು **309 ವಿವಿಧ** ವೃಂದದ ಅಭ್ಯರ್ಥಿಗಳು ಸಿಂಧುತ್ವವನ್ನು ಪಡೆದು ಕರ್ತವ್ಯಕ್ಕೆ ಹಾಜರಾಗಬೇಕಾಗಿದೆ. ಒಟ್ಟಾರೆ ನೇಮಕಾತಿಗೆ ಆಯ್ಕೆಯಾದವರಲ್ಲಿ **662 ವಿವಿಧ** ವೃಂದದ ಅಭ್ಯರ್ಥಿಗಳ ಹುದ್ದೆಗಳು ಭರ್ತಿಯಾಗಬೇಕಾಗಿದೆ;

ಆದರೆ ನ್ಯಾಯಾಲಯದ ಆದೇಶದ ಮೇರೆಗೆ ಒಟ್ಟು **774 ಅಭ್ಯರ್ಥಿಗಳು** ವಿವಿಧ ಹುದ್ದೆಗಳಲ್ಲಿ ಮುಂದುವರೆದಿರುತ್ತಾರೆ. **ಮೇಲ್ಕಂಡ ಮಾಹಿತಿಯ ವಿವಿಧ ವೃಂದವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.**

ಅಲ್ಪಸಂಖ್ಯಾತರ ಶಾಲೆಗಳ ಬೋಧಕ ವೃಂದದ ಹುದ್ದೆಗಳಿಗೆ ಆಯಾ ಜಿಲ್ಲಾ ಮಟ್ಟದ ಇಲಾಖಾಧಿಕಾರಿಗಳು ಹೊರ ಸಂಪನ್ಮೂಲದಿಂದ ನೇಮಿಸಿಕೊಳ್ಳುತ್ತಿದ್ದು ಸಿಬ್ಬಂದಿಯ ಕೊರತೆಯಿರುವುದಿಲ್ಲ.

ಬೋಧಕೇತರ ಸಿಬ್ಬಂದಿಗಳ ಕೊರತೆಗೆ ಸಂಬಂಧಿಸಿದಂತೆ

ಎಲ್ಲಾ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿಯ ಬೋಧಕೇತರ ಸಿಬ್ಬಂದಿಯ ನೇಮಕಾತಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವುದರಿಂದ ಬೋಧಕೇತರ ಸಿಬ್ಬಂದಿ ಕೊರತೆಯಿರುವುದಿಲ್ಲ.

ಅನುಬಂಧ

KARNATAKA RESIDENTIAL EDUCATIONAL INSTITUTIONS SOCIETY

SUBJECT WISE DETAILS OF TEACAHING AND NON-TEACHING STAFF SELECTED. ALLOTED POSTING AND REPORT FOR DUTY AS ON 05.02.2013

SL. NO	SUBJECT	NOTIFIED	SELECTED	ABSENT FOR COUNSELLING	ALLOTED IN COUNSELLING	REPORTED	Not Reported due to sindutva	Candidates continued by Court Direction
1	PRINCIPAL	400	400	59	341	245	96	59
2	KANNADA	366	366	32	334	307	27	110
3	ENGLISH	385	383	55	328	291	37	74
4	HINDI	381	379	9	370	357	13	112
5	MATHEMATICS	450	440	24	416	399	17	86
6	SCIENCE	424	414	25	389	369	20	50
7	SOCIAL SCIENCE	374	372	27	345	319	26	107
8	COMPUTER	460	446	16	430	414	16	34
9	PHY. EDUCATION	404	386	7	379	372	7	87
10	MUSIC	460	249	8	241	233	8	2
11	WARDEN	182	181	36	145	135	10	6
12	FDA	248	248	26	222	199	23	15
13	STAFF NURSE	261	261	30	231	222	9	18
14	DRAWING	445	Not Selected					14
	TOTAL	**5240**	**4525**	**354**	**4171**	**3862**	**309**	**774**

Note: Total Vacancies among selected candidates (354+309):- 663

Total Candidates continued on Court direction:- 774